ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: www.kptcl.com
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521
**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)**

**ಸಂಖ್ಯೆ: ಕವಿಪ್ರನಿನಿ/ಬಿ16/3301/2014-15**

ದಿನಾಂಕ: 3 AUG 2019

ಅಧೀಕ್ಷಕ ಇಂಜಿನಿಯರ್(ವಿ),
ಕಾರ್ಯ ಮತ್ತು ಪಾಲನಾ ವೃತ್ತ,
**ಬೆಸ್ಕಾಂ,** ಬೆಂಗಳೂರು(ದಕ್ಷಿಣ), ರಾಮನಗರ, ಕೋಲಾರ, ತುಮಕೂರು, ದಾವಣಗೆರೆ.
**ಮೆಸ್ಕಾಂ,** ಮಂಗಳೂರು, ಉಡುಪಿ, ಚಿಕ್ಕಮಗಳೂರು, ಶಿವಮೊಗ್ಗ.
**ಸೆಸ್ಕ್,** ಮೈಸೂರು, ಮಂಡ್ಯ, ಹಾಸನ, ಚಾಮರಾಜನಗರ-ಕೊಡಗು.
**ಹೆಸ್ಕಾಂ,** ಹುಬ್ಬಳ್ಳಿ, ಹಾವೇರಿ, ಶಿರಸಿ, ಬೆಳಗಾವಿ, ಚಿಕ್ಕೋಡಿ, ವಿಜಯಪುರ, ಬಾಗಲಕೋಟೆ.
**ಜೆಸ್ಕಾಂ,** ಗುಲ್ಬರ್ಗಾ, ಬೀದರ್, ರಾಯಚೂರು, ಬಳ್ಳಾರಿ, ಕೊಪ್ಪಳ.

ಮಾನ್ಯರೆ,

**ವಿಷಯ:** ಆಪರೇಟರ್/ಓವರ್‌ಸೀಯರ್/ಮಾಪಕ ಓದುಗ/ಸಹಾಯಕ ಉಗ್ರಾಣ ಪಾಲಕ ಹುದ್ದೆಗಳಿಗೆ ಶೇ.30 ಮತ್ತು ಶೇ.20 ರ ಕೋಟಾದಡಿಯಲ್ಲಿ ಸ್ವತಂತ್ರ ಪ್ರಭಾರದಲ್ಲಿ ಕಾರ್ಯನಿರ್ವಹಿಸಲು ಕ್ರಮವಹಿಸುವ ಬಗ್ಗೆ.

**ಉಲ್ಲೇಖ:**
1. ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ16/3301/2014-15, ದಿನಾಂಕ: 21.03.2016.
2. ನಿಗಮದ ಪತ್ರ ಸಂಖ್ಯೆ: ಕವಿಪ್ರನಿನಿ/ಬಿ16/3301/2014-15, ದಿನಾಂಕ: 02.02.2019.
3. ರಿಟ್ ಅರ್ಜಿ ಸಂಖ್ಯೆ: 106742-760/2019, 15677-15682/2019 ಮತ್ತು 14057-14058/2019 ಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಮಾನ್ಯ ಉಚ್ಚ ನ್ಯಾಯಾಲಯವು ಕ್ರಮವಾಗಿ ನೀಡಿರುವ 08.032019, 16.04.2019 ಮತ್ತು 15.04.2019 ರ ಮಧ್ಯಂತರ ಆದೇಶಗಳು.
4. ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ16/3301/2014-15, ದಿನಾಂಕ: 02.02.2019.

*****

ನಿಗಮದ ದಿನಾಂಕ: **21.03.2016** ರ ಸುತ್ತೋಲೆಯಲ್ಲಿ, ಆಪರೇಟರ್/ಓವರ್‌ಸೀಯರ್/ಮಾಪಕ ಓದುಗ/ಸಹಾಯಕ ಉಗ್ರಾಣ ಪಾಲಕ ಹುದ್ದೆಗಳ ಶೇ.30 ಮತ್ತು ಶೇ.20 ರ ಕೋಟಾಗಳಲ್ಲಿನ ಬಡ್ತಿಗೆ ಮೆಕ್ಯಾನಿಕ್ ದರ್ಜೆ-2/ಮಾರ್ಗದಾಳು ಹಾಗೂ ತತ್ಸಮಾನ ಹುದ್ದೆಗಳಿಗೆ ಕರ್ತವ್ಯಕ್ಕೆ ವರದಿ ಮಾಡಿಕೊಂಡ ದಿನಾಂಕವನ್ನು ಪರಿಗಣಿಸಿ ಸೇವಾ ಹಿರಿತನದನ್ವಯ ಪದೋನ್ನತಿ ನೀಡುವಂತೆ ಸ್ಪಷ್ಟೀಕರಿಸಲಾಗಿತ್ತು.

ತದನಂತರ, ಮಾಪಕ ಓದುಗ ಹುದ್ದೆಯ ಶೇ.30 ಮತ್ತು ಶೇ.20 ರ ಕೋಟಾಗಳಲ್ಲಿನ ಬಡ್ತಿಗೆ ಮೆಕ್ಯಾನಿಕ್ ದರ್ಜೆ-2 ಮತ್ತು ಮಾರ್ಗಕರ್ಮಿ ಅಥವಾ ಸಮನಾಂತರ ಹುದ್ದೆಗಳು ಹಾಗೂ ಇತರೆ ನಿರ್ವಹಣಾ ಹುದ್ದೆಗಳ ಸಿಬ್ಬಂದಿಗಳ ಸೇವಾ ಹಿರಿತನವನ್ನು ನೌಕರರು ಪ್ರಥಮವಾಗಿ ಸೇವೆಗೆ ಸೇರಿದ ಹುದ್ದೆಯ ಅಂತಿಮ ಆಯ್ಕೆ ಪಟ್ಟಿಯ ಜ್ಯೇಷ್ಠತೆಯ ಆಧಾರದಲ್ಲಿ ನಿರ್ಧರಿಸುವಂತೆ ನಿಗಮದ ದಿನಾಂಕ: **02.02.2019** ರ ಪತ್ರದಲ್ಲಿ ಸ್ಪಷ್ಟೀಕರಣ ನೀಡಲಾಗಿರುತ್ತದೆ.

ಸದರಿ ಸ್ಪಷ್ಟೀಕರಣದ ವಿರುದ್ಧ ನಿಗಮ ಹಾಗೂ ವಿದ್ಯುತ್ ಸರಬರಾಜು ಕಂಪನಿಗಳ ಕೆಲವು ನೌಕರರು ಕರ್ನಾಟಕ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಸಲ್ಲಿಸಿರುವ ರಿಟ್ ಅರ್ಜಿ ಸಂಖ್ಯೆ: 106742–760/2019, 14057–14058/2019 ಮತ್ತು 15677–15682/2019 ಗಳಿಗೆ ಸಂಬಂಧಿಸಿದಂತೆ, ಮಾನ್ಯ ನ್ಯಾಯಾಲಯ ದಿನಾಂಕ: 08.032019, 15.04.2019 ಮತ್ತು 16.04.2019 ರ ಆದೇಶಗಳಲ್ಲಿ ತಡೆಯಾಜ್ಞೆಯನ್ನು ನೀಡಿರುತ್ತದೆ. ಮಾನ್ಯ ನ್ಯಾಯಾಲಯದ ಆದೇಶದನ್ವಯ ಶೇ.30 ಮತ್ತು ಶೇ.20 ರ ಕೋಟಾಗಳಡಿಯಲ್ಲಿನ ಆಪರೇಟರ್/ಓವರ್‌ಸೀಯರ್/ಮಾಪಕ ಓದುಗ/ಸಹಾಯಕ ಉಗ್ರಾಣ ಪಾಲಕ ಹುದ್ದೆಗಳ ಬಡ್ತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸುವಂತೆ ದಿನಾಂಕ: **02.07.2019** ರ ನಿಗಮದ ಸುತ್ತೋಲೆಯಲ್ಲಿ ಸೂಚಿಸಲಾಗಿದೆ.

ಶೇ.30 ಮತ್ತು ಶೇ.20 ರ ಕೋಟಾಗಳಡಿಯಲ್ಲಿನ ಆಪರೇಟರ್/ಓವರ್‌ಸೀಯರ್/ಮಾಪಕ ಓದುಗ/ಸಹಾಯಕ ಉಗ್ರಾಣ ಪಾಲಕ ಹುದ್ದೆಗಳ ಬಡ್ತಿ ಪ್ರಕ್ರಿಯೆ ಸ್ಥಗಿತಗೊಂಡಿರುವುದರಿಂದ ಹಾಗೂ ಹಲವಾರು ಹುದ್ದೆಗಳು ಖಾಲಿ ಇರುವುದರಿಂದ, ನಿಗಮ/ವಿದ್ಯುತ್ ಸರಬರಾಜು ಕಂಪನಿಗಳ ಕೆಲಸ ಕಾರ್ಯಗಳಿಗೆ ಅಡಚಣೆ ಉಂಟಾಗುತ್ತಿದೆ ಎಂದು ವಿವಿಧ ಕಚೇರಿಗಳ ಮುಖ್ಯಸ್ಥರು ತಿಳಿಸಿರುತ್ತಾರೆ ಮತ್ತು ಪದೋನ್ನತಿಗೆ ಅರ್ಹರಿರುವ ಹಲವಾರು ನೌಕರರು ತಮ್ಮ ಪದೋನ್ನತಿಗೆ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ. ಕವಿಪ್ರನಿ ನೌಕರರ ಸಂಘ(ನೋಂ.ಸಂ.659) ಇದರ ಅಧ್ಯಕ್ಷರು ಹಾಗೂ ಪ್ರಧಾನ ಕಾರ್ಯದರ್ಶಿಗಳು ಅರ್ಹ ನೌಕರರಿಗೆ ಪದೋನ್ನತಿ ನೀಡಲು ಸೂಕ್ತ ಕ್ರಮ ವಹಿಸುವಂತೆ ಕೋರಿರುತ್ತಾರೆ.

ವಿಷಯವನ್ನು ಕೂಲಂಕುಷವಾಗಿ ಪರಿಶೀಲಿಸಿ, ನಿಗಮ ಹಾಗೂ ವಿವಿಧ ವಿದ್ಯುತ್ ಸರಬರಾಜು ಕಂಪನಿಗಳ ದೈನಂದಿನ ಕೆಲಸ ಕಾರ್ಯಗಳ ಹಿತದೃಷ್ಟಿಯಿಂದ, ನಿಗಮದ ದಿನಾಂಕ: **21.03.2016** ರ ಸುತ್ತೋಲೆಯಲ್ಲಿನ ಸೂಚನೆಗಳನ್ವಯ ಅರ್ಹ ನೌಕರರನ್ನು ಶೇ.30 ಮತ್ತು ಶೇ.20 ಕೋಟಾಗಳಡಿಯಲ್ಲಿ ಆಪರೇಟರ್/ಓವರ್‌ಸೀಯರ್/ಮಾಪಕ ಓದುಗ/ಸಹಾಯಕ ಉಗ್ರಾಣ ಪಾಲಕ ಹುದ್ದೆಗಳಿಗೆ ಸ್ವತಂತ್ರ ಪ್ರಭಾರದಲ್ಲಿರಿಸಿ ಕಾರ್ಯನಿರ್ವಹಿಸಲು ಆದೇಶ ಜಾರಿಗೊಳಿಸುವಂತೆ ಸೂಚಿಸಲಾಗಿದೆ. ಸ್ವತಂತ್ರ ಪ್ರಭಾರದಲ್ಲಿ ಕಾರ್ಯನಿರ್ವಹಿಸಲು ಆದೇಶಿಸುವ ಸಂದರ್ಭದಲ್ಲಿ ನೌಕರಿ ಭರ್ತಿ ಮತ್ತು ಬಡ್ತಿ ನಿಯಮಾವಳಿಯಲ್ಲಿನ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ಪಾಲಿಸುವಂತೆ ಸೂಚಿಸಿದೆ.

ಸ್ವತಂತ್ರ ಪ್ರಭಾರದಲ್ಲಿರಿಸಿ ಜಾರಿಗೊಳಿಸುವ ಆದೇಶದಲ್ಲಿ ಈ ಕೆಳಗಿನ ಷರತ್ತನ್ನು ಕಡ್ಡಾಯವಾಗಿ ನಮೂದಿಸುವುದು:

> "ಸ್ವತಂತ್ರ ಪ್ರಭಾರ ವ್ಯವಸ್ಥೆ ಕರ್ನಾಟಕ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ರಿಟ್ ಅರ್ಜಿ ಸಂಖ್ಯೆ: 106742–760/2019, 15677–15682/2019 ಮತ್ತು 14057–14058/2019 ಗಳ ಅಂತಿಮ ನಿರ್ಣಯಕ್ಕೆ ಒಳಪಟ್ಟಿರುತ್ತದೆ"

Gopalk
ನಿರ್ದೇಶಕರು
**(ಆಡಳಿತ ಮತ್ತು ಮಾನವ ಸಂಪನ್ಮೂಲ)**

ಗೆ:

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

www.kptcl.com/eprasarana for information of:

6. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.

8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
9. ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ(ನೋಂದಣಿ ಸಂಖ್ಯೆ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.